ನಿರ್ವಾಹಕ ಹಾಗೂ ಚಾಲಕರ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಈಗಾಗಲೇ ಧಾರವಾಡ ಜಿಲ್ಲೆಯ ಹುಬ್ಬಳ್ಳಿ ವಿಭಾಗಕ್ಕೆ ಅನುಮತಿ ನೀಡಲಾಗಿದ್ದು, ಅದರಂತೆ ನೇಮಕಾ ಪ್ರಕ್ರಿಯೆಗಳು ಪ್ರಾರಂಭವಾಗಿದೆ.

ಅ) ಮೇಲೆ ಸೂಚಿಸಿರುವ ಡಿಪೋಗಳಲ್ಲಿ ಒಟ್ಟು 185 ದಿನಗೂಲಿ ಚಾಲಕರು ಹಾಗೂ 78 ದಿನಗೂಳಿ ನಿರ್ವಾಹಕರು ಕಾರ್ಯ ನಿರ್ವಹಿಸುತ್ತಿದ್ದಾರೆ.

ಇ) ದಿನಗೂಲಿ ಚಾಲಕ:ನಿರ್ವಾಹಕರನ್ನು ಖಾಯಂಗೊಳಿಸಲು ನಿಗಮದ ಮಂಡಳಿಯು ಅನುಮೋದಿಸಿದ್ದು ಸರ್ಕಾರದ ಅನುಮತಿ ಪಡೆದು ಸೂಕ್ತ ಕ್ರಮ ಕೈಗೊಳ್ಳಲಾಗುವುದು.

ವಿಷಯ:- ಬೆಂಗಳೂರು ನಗರ ಸಾರಿಗೆಯ ಖಾಸಗೀಕರಣ.

43(03)

ಶ್ರೀಮತಿ ಪ್ರಮೀಳಾ ನೇಸರ್ಗಿ (ಚಾಮರಾಜಪೇಟೆ):- ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:-

ಅ) ಬೆಂಗಳೂರು ನಗರ ಸಾರಿಗೆಯನ್ನು ಖಾಸಗೀಕರಣ ಮಾಡಿ ನವೆಂಬರ್ 1, 1996 ರಿಂದ ಜಾರಿಗೊಳಿಸಲು ಸರ್ಕಾರ ಆಲೋಚಿಸಿದ್ದು ನಿಜವಲ್ಲವೇ;

ಆ) ಹಾಗಿದ್ದಲ್ಲಿ ಅದನ್ನು ಇದುವರೆವಿಗೂ ಜಾರಿಗೆ ತರದಿರಲು ಕಾರಣವೇನು?

ಶ್ರೀ ಪಿ.ಜಿ.ಆರ್. ಸಿಂಧ್ಯ (ಸಾರಿಗೆ ಸಚಿವರು):-

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ವಿಷಯ:- ಎ.ಪಿ.ಎಂ.ಸಿ. ಯೋಜನೆಯಡಿಯಲ್ಲಿ ರಸ್ತೆಗಳ ಅಭಿವೃದ್ಧಿ ಕಾಮಗಾರಿಗಳಿಗೆ ಮಂಜೂರಾತಿ.

44(16)

ಶ್ರೀ ವಸಂತ ವಿ. ಸಾಲಿಯಾನ (ಕಾಪು):- ಮಾನ್ಯ ಕೃಷಿ ಮಾರುಕಟ್ಟೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:-

ಅ) ಕಾಪು ವಿಧಾನಸಭಾ ಕ್ಷೇತ್ರದಲ್ಲಿ ಎ.ಪಿ.ಎಂ.ಸಿ ಯೋಜನೆಯಲ್ಲಿ ಎಷ್ಟು ರಸ್ತೆಗಳ ಅಭಿವೃದ್ಧಿ ಕಾಮಗಾರಿಗಳಿಗೆ ಮಂಜೂರಾತಿ ನೀಡಲಾಗಿದೆ? ಇವುಗಳಲ್ಲಿ ಪ್ರಾರಂಭಿಸಲಾಗಿರುವ ಕಾಮಗಾರಿಗಳೆಷ್ಟು? ಹಾಗೂ ಈ ಕಾಮಗಾರಿಗಳನ್ನು ಯಾವಾಗ ಪೂರ್ಣಗೊಳಿಸಲಾಗುವುದು?

ಶ್ರೀ ಹೆಚ್. ನಾಗಪ್ಪ (ಕೃಷಿ ಮಾರುಕಟ್ಟೆ ರಾಜ್ಯ ಸಚಿವರು):-

ಅ) ಮೂರು ರಸ್ತೆ ಕಾಮಗಾರಿಗಳನ್ನು ಮಂಜೂರು ಮಾಡಲಾಗಿದೆ. ಇದರಲ್ಲಿ ಯಾವುದೇ ಕಾಮಗಾರಿಯನ್ನು ಪ್ರಾರಂಭಿಸಿಲ್ಲ. ಎರಡು ಕಾಮಗಾರಿಗಳ ಟೆಂಡರು ಪ್ರಕಟಣೆಗೆ ಉಚ್ಚ

ನ್ಯಾಯಾಲಯವು ತಡೆಯಾಜ್ಞೆ ನೀಡಿದೆ. ಮತ್ತೊಂದು ಕಾಮಗಾರಿಗೆ ಟೆಂಡರು ಕರೆಯಲಾಗಿದೆ. ಟೆಂಡರು ಸ್ವೀಕರಿಸಲು 24-2-97 ರಂದು ಕಡೆ ದಿನಾಂಕ ನಿಗದಿ ಪಡಿಸಲಾಗಿದೆ.

ನ್ಯಾಯಾಲಯವು ತಡೆಯಾಜ್ಞೆ ತೆರವು ಮಾಡಿದ ಕೂಡಲೇ ಕೆಲಸ ಪ್ರಾರಂಭಿಸಲಾಗುವುದು.

ವಿಷಯ:- ತುಮಕೂರು ಜಿಲ್ಲೆಯಲ್ಲಿ ಅಕ್ರಮ ಸಾಗುವಳಿ ಸಕ್ರಮಗೊಳಿಸುವ ವಿಚಾರ.

45(320)

ಶ್ರೀ ಆರ್. ನಾರಾಯಣ (ಬೆಳ್ಳಾವಿ):- ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:-

ಅ) ದಿನಾಂಕ 19.9.91 ರವರೆಗೆ ತುಮಕೂರು ಜಿಲ್ಲೆಯಲ್ಲಿ ಅಕ್ರಮ ಸಾಗುವಳಿಯನ್ನು ಸಕ್ರಮಗೊಳಿಸುವ ಸಲುವಾಗಿ ಸಲ್ಲಿಸಿರುವ ಅರ್ಜಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರಗಳನ್ನು ನೀಡುವುದು).

ಆ) ಈ ಪೈಕಿ ವಿಲೇವಾರಿ ಆಗಿರುವ ಅರ್ಜಿಗಳಲ್ಲಿ ತಿರಸ್ಕೃತ ಮತ್ತು ಮಂಜೂರಾದ ಪ್ರಕರಣಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು).

ಇ) ಮಂಜೂರಾತಿ ಪ್ರಕರಣಗಳಲ್ಲಿ ಇದುವರೆವಿಗೆ ಎಷ್ಟು ಜನರಿಗೆ ಸಾಗುವಳಿ ಚೀಟಿ ನೀಡಲಾಗಿದೆ;

ಈ) ಇನ್ನು ಸುಮಾರು ಶೇಕಡ 20 ರಷ್ಟು ಸಾಗುವಳಿದಾರರು ಅಕ್ರಮ ಸಾಗುವಳಿ ಮಾಡುತ್ತಿದ್ದು ಸಕಾಲದಲ್ಲಿ ನಿಗಧಿತ ನಮೂನೆಯಲ್ಲಿ ಅರ್ಜಿ ಸಲ್ಲಿಸದೇ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ;

ಉ) ಬಂದಿದ್ದಲ್ಲಿ ಈ ಅಕ್ರಮ ಸಾಗುವಳಿಯನ್ನು ಸಕ್ರಮಗೊಳಿಸಲು ಸರ್ಕಾರದವರು ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ರಮೇಶ್ ಸಿ. ಜಿಗಜಿಣಗಿ (ಕಂದಾಯ ಸಚಿವರು):-

ಅ)

	ತಾಲ್ಲೂಕಿನ ಹೆಸರು	ಅರ್ಜಿಗಳ ಸಂಖ್ಯೆ
1.	ತುಮಕೂರು	04386
2.	ಗುಬ್ಬಿ	12082
3.	ಕುಣಿಗಲ್	08453
4.	ತಿಪಟೂರು	07359
5.	ತುರುವೇಕೆರೆ	11589
6.	ಚಿಕ್ಕನಾಯ್ಕನಹಳ್ಳಿ	15979